**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**31.07.2026  19.35 hrs**

**<>><><*><><<>**

ಮುಖ್ಯಾಂಶಗಳು

೧. ಆಂಧ್ರ ಮತ್ತು ಕರ್ನಾಟಕಕ್ಕೆ ನಾಳೆ ಪ್ರಧಾನಿ ಭೇಟಿ: ಹಲವು ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ

೨. ತೇಲುವ ಸೌರ ದ್ಯುತಿವಿದ್ಯುತ್ ಯೋಜನೆ, ಪಿಎಂ ಸೂರ್ಯ ಸರೋವರ್‌ಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ

೩. ಎಥೆನಾಲ್ ಮಿಶ್ರಿತ ಪೆಟ್ರೋಲ್ ಯೋಜನೆ, ಭಾರತದ ಆಹಾರ ಭದ್ರತೆಗೆ ಧಕ್ಕೆ ತರುವುದಿಲ್ಲ: ಕೇಂದ್ರ ಸರ್ಕಾರ ಸ್ಪಷ್ಟನೆ.

೪. ತೈಪೆ ಬ್ಯಾಡ್ಮಿಂಟನ್; ಸೆಮಿಫೈನಲ್ಸ್ ಪ್ರವೇಶಿಸಿದ ಭಾರತದ ಉನ್ನತಿ ಹೂಡ ಮತ್ತು ತಾನ್ವಿ ಶರ್ಮಾ

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಆಂಧ್ರಪ್ರದೇಶ ಮತ್ತು ಕರ್ನಾಟಕಕ್ಕೆ ಭೇಟಿ ನೀಡಲಿದ್ದು, ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಆಂಧ್ರಪ್ರದೇಶದ ಭೋಗಪುರಂನಲ್ಲಿ ೫ ಸಾವಿರದ ೬೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ 'ಅಲ್ಲೂರು ಸೀತಾರಾಮ ರಾಜು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ'ವನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ವಿಶಾಖಪಟ್ಟಣಂನಲ್ಲಿ ೪೬೦ ಕೋಟಿ ಹೂಡಿಕೆಯ ರಾಜ್ಯದ ಮೊದಲ ಸೆಮಿಕಂಡಕ್ಟರ್ ತಯಾರಿಕಾ ಘಟಕಕ್ಕೆ ಶಂಕುಸ್ಥಾಪನೆ ನೆರವೇರಿಸಲಿರುವ ಅವರು, ಕರ್ನೂಲ್ ಮತ್ತು ಅನಂತಪುರಂ ಭಾಗದ ಸೌರ ಹಾಗೂ ಪವನ ವಿದ್ಯುತ್ ಯೋಜನಾ ಪ್ರಸರಣ ಜಾಲಗಳು ಸೇರಿದಂತೆ ಹಲವಾರು ಯೋಜನೆಗಳ ಲೋಕಾರ್ಪಣೆ ಹಾಗೂ ಶಂಕುಸ್ಥಾಪನೆಯನ್ನು ನೆರವೇರಿಸಲಿದ್ದಾರೆ. ನಂತರ ಮೈಸೂರಿಗೆ ಆಗಮಿಸಲಿರುವ ಪ್ರಧಾನಿಯವರು, ಐತಿಹಾಸಿಕ ನಿರಂಜನ ಮಠದ ಆವರಣದಲ್ಲಿ ನೂತನವಾಗಿ ನಿರ್ಮಿಸಲಾದ 'ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಯುವ ಕೇಂದ್ರ - ವಿವೇಕ ಸ್ಮಾರಕ'ವನ್ನು ಉದ್ಘಾಟಿಸಿ, ಸಾರ್ವಜನಿಕರನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಸ್ವಾಮಿ ವಿವೇಕಾನಂದರ ೧೮೯೨ರ ಮೈಸೂರು ಭೇಟಿಯ ಸ್ಮರಣಾರ್ಥ ನಿರ್ಮಿಸಲಾದ ಈ ಸ್ಮಾರಕ ೪-ಆಯಾಮಗಳ ಅನುಭವ ಕೇಂದ್ರ, ಗ್ರಂಥಾಲಯ ಹಾಗೂ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ವಿಶೇಷ ಅಧ್ಯಯನ ಸೌಲಭ್ಯಗಳನ್ನು ಒಳಗೊಂಡಿದೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ರಾಷ್ಟ್ರಪತಿ ಭವನದಲ್ಲಿ ಅಟಲ್ ನಾವೀನ್ಯತಾ ಮಿಷನ್‌ನ ತಳಮಟ್ಟದ ಆವಿಷ್ಕಾರಕರೊಂದಿಗೆ ಸಂವಾದ ನಡೆಸಿ, ಅವರು ರೂಪಿಸಿರುವ ಆವಿಷ್ಕಾರಗಳ ಪ್ರದರ್ಶನವನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ, ಸ್ಥಳೀಯ ಅನುಭವ, ವೈಜ್ಞಾನಿಕ ಚಿಂತನೆ, ವೈಯಕ್ತಿಕ ಸೃಜನಶೀಲತೆ ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ಒಗ್ಗೂಡಿಸುವ ತಳಮಟ್ಟದ ಆವಿಷ್ಕಾರಗಳು, ಸಮಾಜದ ಅಗತ್ಯತೆಗಳಿಗೆ ಅತ್ಯಂತ ಸೂಕ್ತವಾಗಿವೆ ಎಂದು ಹೇಳಿದರು. ಸವಾಲುಗಳ ನಡುವೆಯೂ ದೃಢ ಸಂಕಲ್ಪದಿಂದ ಕಾರ್ಯನಿರ್ವಹಿಸಿ, ವ್ಯಕ್ತಿಗಳು, ಕುಟುಂಬಗಳು ಹಾಗೂ ಸಮುದಾಯಗಳ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಶ್ರಮಿಸುತ್ತಿರುವ ಆವಿಷ್ಕಾರಕರ ಪ್ರಯತ್ನವನ್ನು ರಾಷ್ಟ್ರಪತಿ ಶ್ಲಾಘಿಸಿದರು.

**<>><><*><><<>**

ನೀಟ್ ವಿಷಯದ ಕುರಿತು ವಿದ್ಯಾರ್ಥಿಗಳ ಪ್ರತಿಭಟನೆಯ ಸಮಯದಲ್ಲಿ ಪೊಲೀಸ್ ಕ್ರಮದ ಆರೋಪ ಸೇರಿದಂತೆ ಹಲವಾರು ವಿಷಯಗಳ ಕುರಿತು ಪ್ರತಿಪಕ್ಷಗಳು ಗದ್ದಲ ಎಬ್ಬಿಸಿದ ಹಿನ್ನೆಲೆಯಲ್ಲಿ ಸಂಸತ್ತಿನ ಎರಡೂ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ.  ಮೊದಲ ಮುಂದೂಡಿಕೆಯ ನಂತರ, ಮಧ್ಯಾಹ್ನ ೧೨ ಗಂಟೆಗೆ ಲೋಕಸಭೆ ಸಭೆ ಸೇರಿದಾಗ, ಸಭಾಧ್ಯಕ್ಷ ದಿಲೀಪ್ ಸೈಕಿಯಾ ಜನನ ಮತ್ತು ಮರಣಗಳ ನೋಂದಣಿ (ತಿದ್ದುಪಡಿ) ಮಸೂದೆ, ೨೦೨೬ ಅನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಂಡರು. ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಪ್ರತಿಪಕ್ಷಗಳ ಗದ್ದಲದ ನಡುವೆ ಮಸೂದೆಯನ್ನು ಮಂಡಿಸಿದರು. ಯಾವುದೇ ಚರ್ಚೆಯಿಲ್ಲದೆ ಗದ್ದಲದ ನಡುವೆ ಮಸೂದೆಯನ್ನು ಸದನದಲ್ಲಿ ಅಂಗೀಕರಿಸಲಾಯಿತು.  ಈ ಮಧ್ಯೆ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಪ್ರತಿಪಕ್ಷಗಳು ಚರ್ಚೆಯಲ್ಲಿ ಭಾಗವಹಿಸದಿದ್ದಕ್ಕಾಗಿ ಟೀಕಿಸಿದರು.

**<>><><*><><<>**

ಇಂಧನ ಶೇಖರಣಾ ವ್ಯವಸ್ಥೆಗಳೊಂದಿಗೆ ತೇಲುವ ಸೌರ ದ್ಯುತಿವಿದ್ಯುತ್ ಯೋಜನೆಗಳ ಅಭಿವೃದ್ಧಿಗಾಗಿ, ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಇಂದು 'ಪ್ರಧಾನಮಂತ್ರಿ ಸೂರ್ಯ ಸರೋವರ ಯೋಜನೆಗೆ' ಅನುಮೋದನೆ ದೊರೆತಿದೆ. ಸಭೆಯ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಗೆ ಒಟ್ಟು ಐದು ಸಾವಿರದ ೭೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅನುಮೋದನೆ ನೀಡಲಾಗಿದೆ ಎಂದು ಹೇಳಿದರು. ಈ ಯೋಜನೆಯಡಿ ೫ ಸಾವಿರ ಮೆಗಾವ್ಯಾಟ್ ಸಾಮರ್ಥ್ಯದ ತೇಲುವ ಸೌರ ದ್ಯುತಿವಿದ್ಯುತ್ ಯೋಜನೆಗಳನ್ನು, ಕನಿಷ್ಠ ೨ ಗಂಟೆಗಳ ಶೇಖರಣಾ ಸಾಮರ್ಥ್ಯ ಹೊಂದಿರುವ ಇಂಧನ ಶೇಖರಣಾ ವ್ಯವಸ್ಥೆಗಳೊಂದಿಗೆ ಅಭಿವೃದ್ಧಿಪಡಿಸಲಾಗುವುದು. ಒಟ್ಟಾರೆ ಇಂಧನ ಶೇಖರಣಾ ಸಾಮರ್ಥ್ಯವು, ಗಂಟೆಗೆ ೧೦ ಸಾವಿರ ಮೆಗಾವ್ಯಾಟ್ ಆಗಿರಲಿದೆ ಎಂದು ಸಚಿವರು ಮಾಹಿತಿ ನೀಡಿದರು.

**<>><><*><><<>**

ಎಥೆನಾಲ್ ಮಿಶ್ರಿತ ಪೆಟ್ರೋಲ್ ಯೋಜನೆಯು, ಭಾರತದ ಆಹಾರ ಭದ್ರತೆಗೆ ಧಕ್ಕೆ ತರುವುದಿಲ್ಲ ಮತ್ತು ದೇಶದ ಇಂಧನ ಭದ್ರತೆಯನ್ನು ಬಲಪಡಿಸುವ ಹಾಗೂ ಆಮದು ಮಾಡಿಕೊಂಡ ಕಚ್ಚಾ ತೈಲದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಮೂಲಕ ರೈತರಿಗೆ ಉತ್ತಮ ಆದಾಯವನ್ನು ನೀಡುವ ಗುರಿಯನ್ನು ಹೊಂದಿದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಎಥೆನಾಲ್ ಉತ್ಪಾದನೆಗೆ ಭಾರತೀಯ ಆಹಾರ ನಿಗಮದ ಅಕ್ಕಿಯ ಬಳಕೆಯ ಕುರಿತಾದ ಊಹಾಪೋಹಗಳ ಕುರಿತು ಪ್ರತಿಕ್ರಿಯಿಸಿದ

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯವು, ಆಹಾರ ಭದ್ರತಾ ಬಾಧ್ಯತೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ ಎಂದು ಹೇಳಿದೆ. ಕನಿಷ್ಠ ಬೆಂಬಲ ಬೆಲೆ ವ್ಯವಸ್ಥೆ ಅಡಿಯಲ್ಲಿ ಸಂಗ್ರಹಿಸಲಾದ ಪ್ರತಿಯೊಂದು ಧಾನ್ಯವನ್ನು ಮೊದಲು, ಸಾರ್ವಜನಿಕ ವಿತರಣಾ ವ್ಯವಸ್ಥೆ, ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ, ಕಲ್ಯಾಣ ಯೋಜನೆಗಳು ಹಾಗೂ ಕಡ್ಡಾಯ ಕಾಯ್ದಿಟ್ಟ ದಾಸ್ತಾನುಗಳಿಗೆ ಹಂಚಲಾಗುತ್ತದೆ. ದೇಶದ ಆಹಾರ ಭದ್ರತಾ ಅವಶ್ಯಕತೆಗಳನ್ನು ಪೂರೈಸಿದ ನಂತರ, ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯಿಂದ ಪ್ರಮಾಣೀಕರಿಸಲ್ಪಟ್ಟ ಹೆಚ್ಚುವರಿ ದಾಸ್ತಾನನ್ನು ಮಾತ್ರ ಎಥೆನಾಲ್ ಉತ್ಪಾದನೆಗೆ ಅನುಮೋದಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. 'ಪ್ರಧಾನಮಂತ್ರಿ ಜಿ-ವನ್ ಯೋಜನೆ' ಅಡಿಯಲ್ಲಿ ಕೃಷಿ ಅವಶೇಷಗಳಿಂದ ಎರಡನೇ ತಲೆಮಾರಿನ ಎಥೆನಾಲ್ ಉತ್ಪಾದನೆಯನ್ನು ದೇಶವು ವಿಸ್ತರಿಸುತ್ತಿದೆ. ಇದು ಆಹಾರ ಧಾನ್ಯಗಳ ಮೇಲಿನ ಅವಲಂಬನೆ ಕಡಿಮೆ ಮಾಡುತ್ತದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

<>><><*><><<>

ಸುಸ್ಥಿರ ಆರ್ಥಿಕ ಬೆಳವಣಿಗೆ ಹಾಗೂ ಉದ್ಯೋಗ ಸೃಷ್ಟಿಗೆ ಸರ್ಕಾರ, ಕೈಗಾರಿಕೆ, ಉದ್ಯೋಗದಾತರು, ಕಾರ್ಮಿಕರು ಮತ್ತು ಕಾರ್ಮಿಕ ಸಂಘಟನೆಗಳ ನಡುವಿನ ಸೌಹಾರ್ದಯುತ ಕೈಗಾರಿಕಾ ಸಂಬಂಧ ಹಾಗೂ ಸಮನ್ವಯ ಅತ್ಯಗತ್ಯ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ.ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ನವದೆಹಲಿಯಲ್ಲಿ ಫಿಕ್ಕಿ, ಅಖಿಲ ಭಾರತ ಉದ್ಯೋಗದಾತರ ಸಂಘಟನೆ ಹಾಗೂ ಅಂತಾರಾಷ್ಟ್ರೀಯ ಕಾರ್ಮಿಕ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಿದ್ದ ನಾಲ್ಕನೇ ಜಾಗತಿಕ ಕೈಗಾರಿಕಾ ಸಂಬಂಧಗಳ ಶೃಂಗಸಭೆಯಲ್ಲಿ ಅವರು ಭಾಷಣ ಮಾಡಿದರು. ಕಾರ್ಮಿಕರ ಹಕ್ಕುಗಳ ರಕ್ಷಣೆ, ಸಾಮಾಜಿಕ ಭದ್ರತೆಯನ್ನು ಬಲಪಡಿಸುವುದು ಹಾಗೂ ಗುಣಮಟ್ಟದ ಉದ್ಯೋಗ ಸೃಷ್ಟಿಗೆ ಅನುಕೂಲಕರ ವಾತಾವರಣ ನಿರ್ಮಿಸುವುದೇ ಸರ್ಕಾರದ ಕಾರ್ಮಿಕ ಸುಧಾರಣೆಗಳ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

<>><><*><><<>

ಬೃಹತ್ ಠೇವಣಿಗಳ ಮೇಲಿನ ಬಡ್ಡಿದರಗಳಿಗೆ ಸಂಬಂಧಿಸಿದಂತೆ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಪರಿಷ್ಕೃತ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ಅಧಿಕೃತ ಅಧಿಸೂಚನೆಯ ಪ್ರಕಾರ, ಬೃಹತ್ ಠೇವಣಿಗಳು ಸೇರಿದಂತೆ ಎಲ್ಲಾ ವಿಧದ ಠೇವಣಿಗಳ ಮೇಲಿನ ಬಡ್ಡಿದರಗಳನ್ನು ಬ್ಯಾಂಕುಗಳು ಮುಂಚಿತವಾಗಿಯೇ ತಮ್ಮ ಜಾಲತಾಣದಲ್ಲಿ ಸ್ಪಷ್ಟವಾಗಿ ಪ್ರಕಟಿಸಬೇಕು. ಪ್ರಕಟಿಸಲಾದ ದರಗಳ ಪ್ರಕಾರವೇ ಬಡ್ಡಿಯನ್ನು ಪಾವತಿಸಬೇಕಾಗುತ್ತದೆ. ಪ್ರತಿ ವ್ಯವಹಾರ ದಿನ ಬೆಳಿಗ್ಗೆ ೧೦ ಗಂಟೆಗೆ, ಗರಿಷ್ಠ ೧೦ ನಿಮಿಷಗಳ ಸಡಿಲಿಕೆ ಅವಧಿಯೊಂದಿಗೆ, ಬೃಹತ್ ಠೇವಣಿಗಳ ಮೇಲಿನ ಬಡ್ಡಿದರಗಳನ್ನು ಬ್ಯಾಂಕುಗಳು ತಮ್ಮ ಜಾಲತಾಣದಲ್ಲಿ ಪ್ರಕಟಿಸುವುದು ಕಡ್ಡಾಯವಾಗಿರುತ್ತದೆ.

<>><><*><><<>

ವಿವಿಧ ಉನ್ನತಮಟ್ಟದ ಸಭೆಗಳು ಮತ್ತು ಇತರ ಅಧಿಕೃತ ಭೇಟಿಗಳ ಸಮಯದಲ್ಲಿ ಪಾಕಿಸ್ತಾನದಿಂದ ನಡೆಯುತ್ತಿರುವ ಗಡಿಯಾಚೆಗಿನ ಭಯೋತ್ಪಾದನೆಯ ವಿಷಯದ ಕುರಿತು ಸರ್ಕಾರವು ಇತರೆ ದೇಶಗಳಿಗೆ ನಿರಂತರ ಜಾಗೃತಿ ಮೂಡಿಸುತ್ತಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿವರ್ಧನ್ ಸಿಂಗ್, ಸರ್ಕಾರವು, ೩೧

ದೇಶಗಳು ಮತ್ತು ಆರು ಬಹುಪಕ್ಷೀಯ ಗುಂಪುಗಳೊಂದಿಗೆ, ಭಯೋತ್ಪಾದನೆ ನಿಗ್ರಹ ಜಂಟಿ ಕಾರ್ಯಗುಂಪುಗಳನ್ನು ಸ್ಥಾಪಿಸಿದೆ ಎಂದು ಹೇಳಿದರು.

**<>><><*><><<>**

ತೈವಾನ್‌ನಲ್ಲಿ ನಡೆಯುತ್ತಿರುವ ತೈಪೆ ಬ್ಯಾಡ್ಮಿಂಟನ್ ಟೂರ್ನಿಯ ಕ್ವಾರ್ಟರ್ ಫೈನಲ್‌ನಲ್ಲಿ ಇಂದು, ಭಾರತದ ಉನ್ನತಿ ಹೂಡ ಮತ್ತು ತಾನ್ವಿ ಶರ್ಮಾ ಜಯಗಳಿಸಿ, ಮುಂದಿನ ಹಂತಕ್ಕೆ ಅರ್ಹತೆ ಗಳಿಸಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ ಭಾರತದ ಉನ್ನತಿ ಹೂಡ, ತನ್ನದೇ ದೇಶದ ದೇವಿಕಾ ಸಿಹಾಗ್ ವಿರುದ್ಧ ೨-೦ ಸೆಟ್‌ಗಳ ಅಂತರದಲ್ಲಿ ಜಯ ಗಳಿಸಿದ್ದಾರೆ. ಮತ್ತೊಂದು ಪಂದ್ಯದಲ್ಲಿ ಥೈಲ್ಯಾಂಡ್‌ನ ಸುಪಾನಿಡ ಕಾಟೆಥಾಂಗ್ ವಿರುದ್ಧ ತಾನ್ವಿ ಶರ್ಮಾ ೨-೧ ಸೆಟ್ ಅಂತರದಲ್ಲಿ ಜಯಗಳಿಸಿ, ಸೆಮಿಫೈನಲ್ ಪ್ರವೇಶಿಸಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಕಿರಣ್ ಜಾರ್ಜ್, ಜಪಾನ್‌ನ ಯುದಾಯ್, ಒಕಿಮೊತೊ ವಿರುದ್ಧ ಸೋಲನುಭವಿಸಿ, ಪಂದ್ಯಾವಳಿಯಿಂದ ಹೊರನಡೆದಿದ್ದಾರೆ.

**<>><><*><><<>**

೨೦೨೬ರ ಕಾಮನ್‌ವೆಲ್ತ್ ಕ್ರೀಡಾಕೂಟದ ಪುರುಷರ ೧೧೦ ಕೆಜಿ ಭಾರ ಎತ್ತುವ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಗೆದ್ದ ಲವ್‌ಪ್ರೀತ್ ಸಿಂಗ್ ಅವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಭಿನಂದನೆ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಚಿವರು, ಲವ್‌ಪ್ರೀತ್ ಸಿಂಗ್ ಅವರ ಈ ಸಾಧನೆ ಮತ್ತು ಅದ್ಭುತ ಪ್ರದರ್ಶನವು, ದೇಶದ ಗರಿಮೆಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ದಿದೆ ಎಂದು ಅವರು ಹೇಳಿದ್ದಾರೆ. ಮುಂದಿನ ದಿನಗಳಲ್ಲಿಯೂ ಇವರು ಇನ್ನಷ್ಟು ಯಶಸ್ಸು ಸಾಧಿಸಲಿ ಎಂದು ಸಚಿವ ಅಮಿತ್ ಶಾ ಶುಭ ಹಾರೈಸಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**